1586 ... 129
4 ...
04/...

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ ಇವರು ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.

## ಸೂಚನೆ:-

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ರಾಜ್ಯದ 49 ಬುಡಕಟ್ಟು ಜನಾಂಗಗಳಿಗೆ ಸಮಾನ ಸವಲತ್ತು ಮತ್ತು ಅವಕಾಶಗಳು ಸಿಗದೇ ಇರುವುದರಿಂದ ಎಲ್ಲಾ 49 ಬುಡಕಟ್ಟು ಜನಾಂಗಗಳಿಗಾಗಿ ಕರ್ನಾಟಕದಲ್ಲಿ ಭಗವನ್ ಬಿರಸಾ ಮುಂಡಾ ಹೆಸರಿನಲ್ಲಿ ಪ್ರತ್ಯೇಕ ನಿಗಮವನ್ನು ಸ್ಥಾಪಿಸಬೇಕೆಂಬ ಸಾರ್ವಜನಿಕ ಮಹತ್ವದ ವಿಷಯವನ್ನು ಸದನದಲ್ಲಿ ಮಾನ್ಯ ಮುಖ್ಯಮಂತ್ರಿಯವರ ಗಮನವನ್ನು ಸೆಳೆಯಲು ಬಯಸುತ್ತೇನೆ.

## ಉತ್ತರ:-

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವ್ಯಾಪ್ತಿಯಲ್ಲಿ 3 ಸಮುದಾಯಗಳು ಹಾಗೂ ಕರ್ನಾಟಕ ಮೇದಾರ ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಮೇದಾರ ಸಮುದಾಯವು ಒಳಪಟ್ಟಿರುತ್ತದೆ. ಮುಂದುವರೆದು, ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಅಲೆಮಾರಿ, ಅಭಿವೃದ್ಧಿ ನಿಗಮದ ವ್ಯಾಪ್ತಿಯಲ್ಲಿ ಪರಿಶಿಷ್ಟ ಪಂಗಡದ 23 ಸೂಕ್ಷ್ಮ, ಅತಿಸೂಕ್ಷ್ಮ ಸಮುದಾಯಗಳು ಸೇರ್ಪಡೆಗೊಂಡಿರುತ್ತವೆ.

2026-27ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-203ರಲ್ಲಿ "ಅರಣ್ಯ ಮತ್ತು ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಇರುಳ, ಸೋಲಿಗ, ಜೇನುಕುರುಬ, ಕಾಡುಕುರುಬ, ಕುಡಿಯ, ಸಿದ್ದಿ ಮತ್ತು ಇತರೆ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡದ PVTG ಗಳಿಗೆ 'ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮ'ವನ್ನು ಸ್ಥಾಪಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಮೇಲ್ಕಂಡ ಆಯವ್ಯಯ ಘೋಷಣೆ ಕಂಡಿಕೆ-203ರಂತೆ ಅರಣ್ಯ ಮತ್ತು ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಇರುಳ, ಸೋಲಿಗ, ಜೇನುಕುರುಬ, ಕಾಡುಕುರುಬ, ಕುಡಿಯ, ಸಿದ್ದಿ ಮತ್ತು ಇತರೆ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡ ಹಾಗೂ PVTG ಸಮುದಾಯಗಳಿಗೆ 'ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮ'ವನ್ನು ಸ್ಥಾಪಿಸಿ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು.

**ಸಂಖ್ಯೆ: STW/SECB/SAD/26/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು